Date :02.06.2026

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಂದುವರಿದ ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ ಎನ್.ಡಿ.ಎಂ. ವಕೀಲರ ಪರ ಶ್ರೀಮತಿ ಹೆಚ್.ಆರ್.ಎನ್. ವಕೀಲರಿಂದ –**

ಈ ಕೇಸಿನ ಅರ್ಜಿದಾರರು ನನ್ನ ತಾಯಿ ಇದ್ದು, ಅವರು ನನ್ನ ಹೆಸರಿಗೆ ಮುಕ್ತಿಯಾರ್ ಪತ್ರ ಬರೆದು ನೀಡಿದ್ದು, ಅದಕ್ಕೆ ಅನುಗುಣವಾಗಿ ನಾನು ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತವೆ.

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ನನ್ನ ತಾಯಿ ನನ್ನ ಹೆಸರಿಗೆ ಬರೆದು ನೀಡಿದ ಮುಕ್ತಿಯಾರ್ ಪತ್ರ , ಅರ್ಜಿಯಲ್ಲಿ ಕಾಣಿಸಿದ ಆಸ್ತಿಯ ಬಗ್ಗೆ ಇರುವ 1 ಪಹಣಿ ಪ್ರತಿ ಹಾಗೂ ದಿಃ 08.09.2022 ರ ದಿನಾಂಕದ ಒಂದು ಅವಾರ್ಡ ನೋಟೀಸಿನ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–1 ರಿಂದ 3 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮುಂದುವರಿದ ಮುಖ್ಯವಿಚಾರಣೆಗಾಗಿ ವಕೀಲರು ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಿ ಮುಂದುವರಿದ ಮುಖ್ಯವಿಚಾರಣೆಗೆ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ)

*ಓದಿ ಹೇಳಿ ಕೇಳಿ ಸರಿ ಇದೆ.*

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ